# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ: ತುವಿ:ಶೈವಿ:PG:2022-23/2617 ದಿನಾಂಕ: 28.07.2022

## ಸುತ್ತೋಲೆ

ವಿಷಯ: ಎಲ್ಲಾ ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳ ಪ್ರವೇಶಾನುಮೋದನೆ ಕುರಿತು.

ಉಲ್ಲೇಖ : 1) ವಿಶ್ವವಿದ್ಯಾನಿಲಯದ ಸುತ್ತೋಲೆ ಸಂಖ್ಯೆ: ತುವಿ:ಶೈವಿ:PG:2021-22/529 ದಿನಾಂಕ:23.05.2022

2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 23.07.2022 (ಕಂಡಿಕೆ:24 ಪುಟ ಸಂಖ್ಯೆ:08)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22ನೇ ಶೈಕ್ಷಣಿಕ ಸಾಲಿನ ಪ್ರವೇಶಾನುಮೋದನೆ ಕುರಿತು ಮೂಲ ದಾಖಲೆಗಳನ್ನು ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಪ್ರವೇಶಾನುಮೋದನೆ ನೀಡುವ ಕುರಿತು ಕ್ರಮ ಕೈಗೊಳ್ಳಲಾಗಿದೆ. ಆದರೆ ಕೆಲವು ಸ್ನಾತಕೋತ್ತರ ವಿಭಾಗಗಳಿಗೆ ದಾಖಲಾಗಿರುವ ವಿದ್ಯಾರ್ಥಿಗಳು, 2021-22ನೇ ಶೈಕ್ಷಣಿಕ ಸಾಲಿನ ಪ್ರವೇಶ ಶುಲ್ಕವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸಿರುವುದಿಲ್ಲ.

ಈ ಸಂಬಂಧ ಉಲ್ಲೇಖ(1)ರ ಸುತ್ತೋಲೆಯಲ್ಲಿ ದಿನಾಂಕ:23.05.2022 ರಿಂದ ಒಂದು ತಿಂಗಳ ಅವಧಿಯೊಳಗಡೆ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸುವಂತೆ ತಿಳಿಸಲಾಗಿರುತ್ತದೆ.

ಆದರೆ, ಇದುವರೆವಿಗೂ ಯಾವುದೇ ಸ್ನಾತಕೋತ್ತರ ವಿಭಾಗಗಳಿಂದ ಸದರಿ ವಿಷಯದ ಕುರಿತು ಮಾಹಿತಿಯು ಸ್ವೀಕೃತಿಯಾಗಿರುವುದಿಲ್ಲ. ಈ ಅಂಶವನ್ನು ವಿಶ್ವವಿದ್ಯಾನಿಲಯವು ಗಂಭೀರವಾಗಿ ಪರಿಗಣಿಸಿದ್ದು, ಈ **ಪತ್ರ ತಲುಪಿದ ಕೂಡಲೇ 2021-22ನೇ ಶೈಕ್ಷಣಿಕ ಸಾಲಿನ ಪ್ರವೇಶ ಶುಲ್ಕವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸಿ ಅದರ ಮಾಹಿತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಈ ಮೂಲಕ ತಿಳಿಸಿದೆ.**

**(ಷರ: ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸಿರುವ ಸ್ನಾತಕೋತ್ತರ ವಿಭಾಗಗಳನ್ನು ಹೊರತುಪಡಿಸಿದೆ.)**

ಆದೇಶದ ಮೇರೆಗೆ

Mangalahari M

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

ಕರಡು ಪತ್ರವು ಮಾನ್ಯ ಕುಲಸಚಿವರಿಂದ ಅನುಮೋದಿಸಲಾಗಿದೆ.

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು– ಈ ಮಾಹಿತಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
3. ಕಚೇರಿ ಪ್ರತಿ